ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	613
ಸದಸ್ಯರ ಹೆಸರು	:	ಶ್ರೀ ಎನ್.ರವಿಕುಮಾರ್
ಉತ್ತರಿಸುವ ಸಚಿವರು	:	ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ	:	05.03.2021

ಕ್ರ ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದ ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಯಾವ ಯಾವ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುತ್ತದೆ;	ನಾಲ್ಕೂ ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗಳ ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ, ಮಹಿಳೆಯರಿಗಾಗಿ ವಿಶ್ರಾಂತಿಗೃಹ, ಪ್ರಯಾಣಿಕರಿಗೆ ಆಸನಗಳ ವ್ಯವಸ್ಥೆ, ಪ್ರಯಾಣಿಕರ ಕಾಯುವ ಹಜಾರ ವ್ಯವಸ್ಥೆ, ಬೆಳಕಿನ ವ್ಯವಸ್ಥೆ, ಪಾರ್ಕಿಂಗ್ ವ್ಯವಸ್ಥೆ, ಮುಂಗಡ ಟಿಕೇಟ್ ಕಾಯ್ದಿರಿಸುವಿಕೆ ಕೊಠಡಿ, ವಾಣಿಜ್ಯ ಮಳಿಗೆಗಳು, ಉಪಹಾರಗೃಹ ಇತ್ಯಾದಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿರುತ್ತದೆ. ಪ್ರಮುಖ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರ ಬಸ್ ನಿಲ್ದಾಣಗಳಲ್ಲಿ ಮಹಿಳೆಯರಿಗೆ ವಿಶ್ರಾಂತಿ ಕೊಠಡಿಗಳಲ್ಲಿ ಶಿಶುಪಾಲನಾ ಕೊಠಡಿ ಒದಗಿಸಲಾಗಿರುತ್ತದೆ.
ಆ)	ರಾಜ್ಯದ ಹಲವಾರು ಬಸ್ ನಿಲ್ದಾಣಗಳಲ್ಲಿ ಶುದ್ಧ ಕುಡಿಯುವ ನೀರು, ಶುಭ್ರ ಶೌಚಾಲಯದ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ವ್ಯವಸ್ಥೆಗಳನ್ನು ಒದಗಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ;	ನಾಲ್ಕೂ ಸಾರಿಗೆ ಸಂಸ್ಥೆಗಳ ಪ್ರಮುಖ ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮತ್ತು ಶುಭ್ರ ಶೌಚಾಲಯ ವ್ಯವಸ್ಥೆ ಒದಗಿಸಲಾಗಿದೆ. ಮುಂಬರುವ ದಿನಗಳಲ್ಲಿ ಹಂತ ಹಂತವಾಗಿ ಎಲ್ಲಾ ಬಸ್ ನಿಲ್ದಾಣಗಳಲ್ಲಿ ಸದರಿ ವ್ಯವಸ್ಥೆಯನ್ನು ಕಲ್ಪಿಸಲಾಗುವುದು.
ಇ)	ಸಣ್ಣ ಮಕ್ಕಳನ್ನು ಹೊಂದಿರುವ ತಾಯಂದಿರಿಗೆ ಮಕ್ಕಳ ಹಸಿವನ್ನು ನೀಗಿಸುವ ಸಲುವಾಗಿ ಬಸ್ಸು ನಿಲ್ದಾಣದಲ್ಲಿ ಪ್ರತ್ಯೇಕ ವಿಶ್ರಾಂತಿ ಸ್ಥಳವನ್ನು ನಿಗದಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?	ನಾಲ್ಕೂ ಸಾರಿಗೆ ಸಂಸ್ಥೆಗಳ ಪ್ರಮುಖ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರ ಬಸ್ ನಿಲ್ದಾಣಗಳಲ್ಲಿ ಮಹಿಳೆಯರಿಗೆ ವಿಶ್ರಾಂತಿ ಕೊಠಡಿಗಳಲ್ಲಿ ಶಿಶುಪಾಲನಾ ಕೊಠಡಿಗಳನ್ನು ಒದಗಿಸಲಾಗಿದ್ದು, ಇನ್ನುಳಿದ ಬಸ್ ನಿಲ್ದಾಣಗಳಲ್ಲಿ ಅವಶ್ಯಕತೆಗನುಗುಣವಾಗಿ ಮತ್ತು ಸಾರಿಗೆ ಸಂಸ್ಥೆಗಳ ಆರ್ಥಿಕ ಪರಿಸ್ಥಿತಿಯನ್ನಾಧರಿಸಿ ಹಂತ ಹಂತವಾಗಿ ಸದರಿ ವ್ಯವಸ್ಥೆಯನ್ನು ಒದಗಿಸಲು ಕ್ರಮ ಜರುಗಿಸಲಾಗುವುದು.

ಸಂಖ್ಯೆ: ಟಿಡಿ 56 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯ ಮಂತ್ರಿಗಳು ಹಾಗೂ
ಸಾರಿಗೆ ಸಚಿವರು